# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ
## ಕೆಂಪೇಗೌಡ ವಾರ್ಡ್ ನಂ–01ರಲ್ಲಿ ದಿನಾಂಕ: 18–12–2021. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ, ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ),
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ–01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ –01ರ ವ್ಯಾಪ್ತಿಯಲ್ಲಿ ಕೋವಿಡ್ – 19ರ ಸಂಬಂಧ ಮೂರನೇ ಅಲೆ ಬಗ್ಗೆ ಚರ್ಚಿಸಿ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳುವಂತೆ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಸೂಚಿಸಿದರು.

2. ಕೆಂಪೇಗೌಡ ವಾರ್ಡ್ ನಂ –01ರಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ಇಲ್ಲದೇ ಇರುವುದರಿಂದ ದಿನನಿತ್ಯದ ಘನತ್ಯಾಜ್ಯ ನಿರ್ವಹಣೆ ಕೆಲಸಗಳನ್ನು ನಿರ್ವಹಿಸುವುದು ಕಷ್ಟಕರವಾಗಿದ್ದು, ಈಗಾಗಲೇ ಹಲವಾರು ಭಾರಿ ದೂರನ್ನು ನೀಡಿದ್ದರೂ ಸಹ ಈ ವಾರ್ಡ್‌ನಲ್ಲಿ ಕೆಲಸಗಳನ್ನು ನಿರ್ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಬಂದಿರುವುದಿಲ್ಲ ಎಂದು ಸಭೆಯಲ್ಲಿ ಶ್ರೀ.ಅ.ಬ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು.

3. ಕೆಂಪೇಗೌಡ ವಾರ್ಡ್ ನಂ –01ರ ವ್ಯಾಪ್ತಿಯಲ್ಲಿರುವ ಸುರಭಿ ಬಡಾವಣೆ ಮತ್ತು ಜಕ್ಕೂರು ಮುಖ್ಯರಸ್ತೆಯಲ್ಲಿ ರಸ್ತೆಯ ಚರಂಡಿಯಲ್ಲಿ ಅನದೀಕೃತವಾಗಿ ಸ್ಯಾನಿಟರಿ ನೀರನ್ನು ಬೀಡುತ್ತಿರುವ ಬಗ್ಗೆ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು.

4. ಕೆಂಪೇಗೌಢ ವಾರ್ಡ್ ನಂ –01ರ ವ್ಯಾಪ್ತಿಯಲ್ಲಿ ಒಣ ಕಸವನ್ನು ಸಂಗ್ರಹಣೆ ಸರಿಯಾದ ರೀತಿಯಲ್ಲಿ ಮಾಡುತ್ತಿಲ್ಲವೆಂದು ಸ್ಥಳೀಯರು ಸಭೆಯಲ್ಲಿ ದೂರನ್ನು ಸಲ್ಲಿಸಿದ್ದು, ಇದಕ್ಕೆ ಸಂಬಂದಿಸಿದಂತೆ ವಾರ್ಡನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿ ಸ್ಥಳ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಹಾಗೂ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಒಣ ಕಸ ಸಂಗ್ರಹಣೆ ಮಾಡಲು ಮೂರು ಆಟೋ ಟಿಪ್ಪರ್‌ಗಳನ್ನು ಒದಗಿಸಬೇಕಾಗಿದ್ದು, ಇದರಲ್ಲಿ ಒಂದು ಆಟೋ ಬರುತ್ತಿಲ್ಲವೆಂದು ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು. ಸಂಬಂದಿಸಿದ ಏಜೆನ್ಸಿಯವರನ್ನು ವಿಚಾರಿಸಿದಾಗ ಬಿಲ್ ಪಾವತಿಸದ ಕಾರಣದಿಂದಾಗಿ ಆಟೊ ಟಿಪ್ಪರ್‌ಗಳನ್ನು ಕಳುಹಿಸುತ್ತಿಲ್ಲವೆಂದು ಕಿರಿಯ ಆರೋಗ್ಯ ಪರಿವೀಕ್ಷಕರು ನೊಡೆಲ್ ಅಧಿಕಾರಿಗಳಿಗೆ ತಿಳಿಸಿದರು.

5. ಕೆಂಪೇಗೌಡ ವಾರ್ಡ್ ನಂ–01ರಲ್ಲಿ ನಡೆಯುತ್ತಿರುವ ವಾರ್ಡ್ ಕಮಿಟಿ ಸಭೆಗಳಿಗೆ ಕಂದಾಯ ಅಧಿಕಾರಿಗಳು ಗೈರು ಹಾಜರಾಗುತ್ತಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ಅಕ್ಷೇಪಣೆ ವ್ಯಕ್ತಪಡಿಸಿದರು ಹಾಗೂ ಮುಂದಿನ ಸಭೆಗೆ ಹಾಜರಾಗುವಂತೆ ಸಂಬಂದಿಸಿದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡುವಂತೆ ನೊಡೆಲ್ ಅಧಿಕಾರಿಗಳು ಕಾರ್ಯದರ್ಶಿಗಳಿಗೆ ಸೂಚಿಸಿದರು.

6. ವಾರ್ಡ್‌ನ ವ್ಯಾಪ್ತಿಯಲ್ಲಿರುವ ರಸ್ತೆ ಬದಿಗಳಲ್ಲಿ ಬೀದಿ ದೀಪಗಳು ಹಾಗೂ ಹೈ ಮಾಸ್ಕ್ ಲೈಟ್‌ಗಳು ಸರಿಯಾದ ರೀತಿಯಲ್ಲಿ ನಿರ್ವಹಣೆ ಕೆಲಸ ಮಾಡುತ್ತಿರುವುದಿಲ್ಲ ಎಂದು ಸಭೆಯಲ್ಲಿ ಅಕ್ಷೆಪಣೆ ಸಲ್ಲಿಸಿದ್ದು, ಸದರಿ ದೂರಿನನ್ವಯ ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ನಿರ್ವಹಣೆ ಮಾಡಲು ನೊಡೆಲ್ ಅಧಿಕಾರಿಗಳು ಸೂಚಿಸಿದರು.

7. ಮಾರುತಿನಗರ 24ನೇ ಅಡ್ಡರಸ್ತೆಯ ಮತ್ತು ಯಲಹಂಕ ಬಾಂಗ್ಲಾ ಶಾಲೆಯ ರಸ್ತೆಯ ಬದಿಯಲ್ಲಿ ಚರಂಡಿಯಲ್ಲಿ ಹೂಳು ತುಂಬಿರುವುದರಿಂದ ತೆರವುಗೊಳಿಸಿಕೊಡಬೇಕೆಂದು ಹಾಗೂ ಮುರಿದು ಬಿದ್ದಿರುವ ಆರ್.ಸಿ.ಸಿ ಕವರಿಂಗ್ ಸ್ಲಾಬ್‌ಗಳನ್ನು ಅಳವಡಿಸಿಕೊಡಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಮನವಿ ಸಲ್ಲಿಸಿದರು.

8. ವಾರ್ಡ್‌ಗಳ ವ್ಯಾಪ್ತಿಯಲ್ಲಿ ವಾಹನಗಳನ್ನು ರಸ್ತೆಯ ಅಕ್ಕಪಕ್ಕದಲ್ಲಿ ಅನಧೀಕೃತವಾಗಿ ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕರ ಒಡಾಟಕ್ಕೆ ತುಂಬಾ ತೊಂದರೆ ಉಂಟಾಗಿದ್ದು, ಅನದೀಕೃತವಾಗಿ ವಾಹನ ನಿಲುಗಡೆ ಮಾಢುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಸಾರ್ವಜನಿಕರು ದೂರನ್ನು ನೀಡಿದ್ದು, ಫೊಲಿಸ್ ಟ್ರಾಫಿಕ್ ಸೆಲ್ ಯಲಹಂಕ ವಿಭಾಗರವರಿಗೆ ಪತ್ರ ಬರೆಯುವುದಾಗಿ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ತಿಳಿಸಿದರು.

9. ವಾರ್ಡ್‌ನ ಪರಿಮಿತಿಯಲ್ಲಿರುವ ಕೆಲವು ಸ್ಥಳಗಳಲ್ಲಿ ಶಾಲಾ ಕಾಲೇಜಿನ ಮಕ್ಕಳು ಡ್ರಗ್ಸ್ ಬಳಸುತ್ತಿರುವ ಬಗ್ಗೆ ದೂರು ಬಂಧಿರುವ ಹಿನ್ನಲೆಯಲ್ಲಿ ಆರಕ್ಷಕ ನಿರೀಕ್ಷಕರು ಯಲಹಂಕ ಪೊಲಿಸ್ ಠಾಣೆಗೆ ಪತ್ರ ಬರೆಯುವುದಾಗಿ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ತಿಳಿಸಿದರು.

10. ರೈತರ ಸಂತೆ ರಸ್ತೆ, ಕೋಗಿಲು ಮುಖ್ಯರಸ್ತೆ ಮತ್ತು ಡೌನ್ ಬಜಾರ್ ರಸ್ತೆಯಲ್ಲಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿಗಳನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಸಭೆಯಲ್ಲಿ ಕೋರಿದ್ದು, ಮುಂದಿನ ವಾರದಲ್ಲಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿ ಮುಗ್ಗಟ್ಟುಗಳನ್ನು ತೆರವುಗೊಳಿಸುವುದಾಗಿ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

11. ಅಯ್ಯಪ್ಪ ಸ್ವಾಮಿ ದೇವಸ್ಥಾನದ ರಸ್ತೆಯನ್ನು ಡಾಂಬರೀಕರಣ ಮಾಡಿಕೊಡಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಕೋರಿದರು. ಸಪ್ತಗಿರಿ ಬಡಾವಣೆಯಲ್ಲಿ ಖಾಲಿ ಸ್ಥಳದಲ್ಲಿ ಯು.ಜಿ.ಡಿ ನೀರು ಶೇಖರಣೆಯಾಗಿ ದುರ್ವಾಸನೆಯಿಂದ ಬರುತ್ತಿರುವುದರ ಬಗ್ಗೆ ಅಕ್ಷೇಪಣೆ ವ್ಯಕ್ತಪಡಿಸಿರುವುದರಿಂದ ಜಂಟಿ ತಪಾಸಣೆ ಮಾಡಲು ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

12. ಕೆಂಪೇಗೌಡ ವಾರ್ಡ್ ನಂ–01ರ ಯಲಹಂಕ ಕೆರೆಗೆ ಪುಟ್ಟೇನಹಳ್ಳಿ ಕಡೆಯಿಂದ ಯು.ಜಿ.ಡಿ. ನೀರು ಕಲುಷಿತ ನೀರನ್ನು ಬಿಡುತ್ತಿರುವ ಬಗ್ಗೆ ಅಕ್ಷೇಪಣೆ ವ್ಯಕ್ತಪಡಿಸಿರುವುದರಿಂದ ಸ್ಥಳ ಪರಿಶೀಲನೆ ಮಾಡಲು ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೊಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.